# ಸಭಾಪತಿ ಬಸವರಾಜ ಹೊರಟ್ಟಿಗೆ ಮಂತ್ರಾಲಯಂ ಪರಿಮಳ ಪ್ರಶಸ್ತಿ

KP



ಮಂತ್ರಾಲಯದ ಪೀಠಾಧಿಪತಿ ಸುಬುಧೇಂದ್ರತೀರ್ಥ ಶ್ರೀಪಾದಂಗಳವರು ಗಣ್ಯರ ಸಮ್ಮುಖದಲ್ಲಿ ಬಸವರಾಜ ಹೊರಟ್ಟಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದರು.

• **ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ

ಶ್ರೀಕ್ಷೇತ್ರ ಮಂತ್ರಾಲಯದ ವತಿಯಿಂದ ಸಾಧಕರಿಗೆ ನೀಡುವ ಪ್ರತಿಷ್ಠಿತ 2022-23ನೇ ಸಾಲಿನ ಮಂತ್ರಾಲಯಂ ಪರಿಮಳ ಪ್ರಶಸ್ತಿಗೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಭಾಜನರಾಗಿದ್ದಾರೆ.

ಮಂತ್ರಾಲಯದಲ್ಲಿ ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಪೀಠಾಧಿಪತಿ ಸುಬುಧೇಂದ್ರತೀರ್ಥ ಶ್ರೀಪಾದಂಗಳವರು ಸಭಾಪತಿ ಹೊರಟ್ಟಿಗೆ ಪುರಸ್ಕಾರ ಪ್ರದಾನ ಮಾಡಿದರು.

ಬಳಿಕಮಾತನಾಡಿದಸುಬುಧೇಂದ್ರತೀರ್ಥ ಶ್ರೀಪಾದಂಗಳವರು, ಹೋರಾಟಕ್ಕೆ ಪರ್ಯಾಯ ಹೆಸರಾಗಿ ಹೊರಟ್ಟಿ ಎನ್ನುವಂತೆ ಕನ್ನಡ ನಾಡಿನೆಲ್ಲೆಡೆ ಪ್ರಚಲಿತದಲ್ಲಿದೆ. ಒಬ್ಬ ವ್ಯಕ್ತಿ ಸತತ ಎಂಟು ಬಾರಿ ವಿಧಾನ ಪರಿಷತ್ ಪ್ರವೇಶಿಸುವುದು ಸಾಮಾನ್ಯದ ಮಾತಲ್ಲ, ತಮ್ಮ ಮತದಾರರನ್ನು ಅಷ್ಟು ಅವಧಿಗೆ ಹಿಡಿದಿಡುವುದು ಸುಲಭದ ಮಾತೂ ಅಲ್ಲ. ಇಷ್ಟು ವರ್ಷ ಅವರು ಆಯ್ಕೆಯಾಗಿದ್ದಾರೆ ಎಂದರೆ ಕೆಲಸದಲ್ಲಿ ಅವರಿಗಿರುವ ಶ್ರದ್ಧೆ ಮತ್ತು ಪ್ರಾಮಾಣಿಕತೆ ಕಾರಣ ಎಂದರು.

ಪ್ರಶಸ್ತಿ ಸ್ವೀಕರಿಸಿದ ಸಭಾಪತಿ ಬಸವರಾಜ ಹೊರಟ್ಟಿ, ಮೊದಲಿನಿಂದಲೂ ನಾನು ಗುರುರಾಯರ ಭಕ್ತನಾಗಿದ್ದೇನೆ. ಮಠ ನನ್ನ ಸಮಾಜಮುಖಿ ಕಾರ್ಯ ಗಮನಿಸಿ ಪ್ರಧಾನಿಸಿದ ಪ್ರಶಸ್ತಿ ಸ್ವೀಕರಿಸಿ ಪುನೀತನಾಗಿದ್ದೇನೆ. ಈ ಪ್ರಶಸ್ತಿಯನ್ನು ಸ್ವೀಕರಿಸಿದಾಗಿನಿಂದ ಇನ್ನೂ ಹೆಚ್ಚೆಚ್ಚು ಸಮಾಜಮುಖಿ ಕಾರ್ಯ ಮಾಡುವ ಹುಮ್ಮಸ್ಸು ನನ್ನಲ್ಲಿ ಮೂಡಿದೆ ಎಂದರು. ಈ ವೇಳೆ ಮಾಜಿ ಸಚಿವ ಆರ್.ವಿ. ದೇಶಪಾಂಡೆ, ಸಚಿವ ಶಂಕರ ಪಾಟೀಲ ಮುನೇನಕೊಪ್ಪ, ಅವ್ವ ಸೇವಾ ಟ್ರಸ್ಟ್ ಸಂಚಾಲಕ ಡಾ. ಬಸವರಾಜ ಧಾರವಾಡ, ಕೊಪ್ಪಳದ ಪ್ರಾಣೇಶ ಸೇರಿದಂತೆ ಇತರ ಗಣ್ಯರು, ಮಠದ ಭಕ್ತರು ಉಪಸ್ಥಿತರಿದ್ದರು.

# ಬೆಳಗಾವಿ ಉಳಿಸಲು ಕೆಎಲ್‌ಇ ಪ್ರಮುಖ ಪಾತ್ರ

## ಅಭಿನಂದನಾ ಕಾರ್ಯಕ್ರಮದಲ್ಲಿ ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷ ಡಾ. ಪ್ರಭಾಕರ ಕೋರೆ

• **ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ

ಸೇವೆಗೆ ಆದ್ಯತೆ ನೀಡಿರುವ ಕೆಎಲ್‌ಇ ಸಂಸ್ಥೆ ಶಿಕ್ಷಣ, ಆರೋಗ್ಯ ಹಾಗೂ ಕೃಷಿ ರಂಗಕ್ಕೆ ಅಪಾರ ಕೊಡುಗೆ ನೀಡಿದೆ. ಕರ್ನಾಟಕದಲ್ಲಿ ಬೆಳಗಾವಿ ಉಳಿಸಲು ಪ್ರಮುಖ ಪಾತ್ರ ವಹಿಸಿದೆ ಎಂದು ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷ ಡಾ. ಪ್ರಭಾಕರ ಕೋರೆ ಹೇಳಿದರು.

ನಗರದ ಕೆಎಲ್‌ಇ ಸಂಸ್ಥೆಯ ಎಂ.ಆರ್. ಸಾಖರೆ ಆಂಗ್ಲ ಮಾಧ್ಯಮ ಶಾಲೆಯಲ್ಲಿ ನಡೆದ ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷ ಡಾ. ಪ್ರಭಾಕರ ಕೋರೆ ಅವರ ಅಮೃತ ಮಹೋತ್ಸವದ ನಿಮಿತ್ತ ಅಭಿನಂದನಾ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಕೆಎಲ್‌ಇ ಸಂಸ್ಥೆ ಬೆಳಗಾವಿಯಲ್ಲಷ್ಟೆ ಹೆಚ್ಚಿನದಾಗಿ ಕಾರ್ಯನಿರ್ವಹಿಸುತ್ತದೆ ಎಂದು ಕೆಲವರು ಹೇಳುತ್ತಾರೆ. ಆದರೆ ವಾಸ್ತವವಾಗಿ ಹುಬ್ಬಳ್ಳಿಯಲ್ಲಿ ಸಂಸ್ಥೆಯ ಹೆಚ್ಚಿನ ಕಾರ್ಯ ನಡೆಯುತ್ತವೆ. ದಾನದ ಮೂಲಕ ಬಂದ ಹಣದಿಂದ ಸಂಸ್ಥೆ ಕಟ್ಟಿ ಬೆಳೆಸಲಾಗಿದೆ. ದಾನದ ಮೊತ್ತ ಮಹತ್ವದ್ದಲ್ಲ, ನೀಡುವ ಮನಸ್ಸು ಮುಖ್ಯವಾದುದು. ಆ ನಿಟ್ಟಿನಲ್ಲಿ ಶಿರಸಂಗಿ ಲಿಂಗರಾಜರು, ಭೂಮರಡ್ಡಿಯವರಂತಹ ಮಹನೀಯರಿಂದ ಸಂಸ್ಥೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೆಳೆದಿದೆ. ಈ ಸಂಸ್ಥೆ ರಾಜ್ಯಕ್ಕೆ ಎರಡು ಮುಖ್ಯಮಂತ್ರಿಗಳನ್ನು ನೀಡಿದೆ. ಇನ್ಫೋಸಿಸ್ ಸಂಸ್ಥಾಪಕಿ ಇದೇ ಕಾಲೇಜಿನಲ್ಲಿ ಓದಿದ್ದಾರೆ ಎನ್ನುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ಉತ್ತರ ಕರ್ನಾಟಕ ಭಾಗದ ಅನೇಕ ಗ್ರಾಮೀಣ ಭಾಗದಲ್ಲಿ ಕಾಲೇಜು ಸ್ಥಾಪಿಸಲಾಗಿದೆ. ಸಂಸ್ಥೆಯಲ್ಲಿ ಒಟ್ಟು 1.48 ಲಕ್ಷ ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. 18 ಸಾವಿರ ಶಿಕ್ಷಕರಿದ್ದಾರೆ. ಕೃಷಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಬೆಳಗಾವಿಯಲ್ಲಿ ಕೃಷಿ ವಿಜ್ಞಾನ ಕೇಂದ್ರ ಆರಂಭಿಸಲಾಗಿದ್ದು, ಕೃಷಿಕರಿಗೆ ಮಾರ್ಗದರ್ಶನ ನೀಡಲಾಗುತ್ತಿದೆ ಎಂದು ಹೇಳಿದರು.


ಅಭಿನಂದನಾ ಕಾರ್ಯಕ್ರಮದಲ್ಲಿ ಪ್ರಭಾಕರ ಕೋರೆ ದಂಪತಿ ಸನ್ಮಾನಿಸಲಾಯಿತು.

### ₹ 700 ಕೋಟಿ ವೆಚ್ಚದಲ್ಲಿ ಕಾಲೇಜು ನಿರ್ಮಾಣ

ಆರೋಗ್ಯ ಕ್ಷೇತ್ರದಲ್ಲಿ ಕೆಎಲ್‌ಇ ಸಂಸ್ಥೆ ಬಹುದೊಡ್ಡ ಕ್ರಾಂತಿ ಮಾಡಿದೆ. ಇದುವರೆಗೆ ಬೆಳಗಾವಿಯಲ್ಲಿ 56 ಲಕ್ಷ ರೋಗಿಗಳಿಗೆ ಚಿಕಿತ್ಸೆ ನೀಡಲಾಗಿದೆ. ಹಾರ್ಟ್, ಕಿಡ್ನಿ, ಶ್ವಾಸಕೋಶ ಕಸಿ ಮಾಡಲಾಗುತ್ತಿದೆ. ಹುಬ್ಬಳ್ಳಿಯ ಬಹುದಿನಗಳ ಕನಸು ವೈದ್ಯಕೀಯ ಆಸ್ಪತ್ರೆ ಕಾಮಗಾರಿ ನಡೆಯುತ್ತಿದೆ. ₹ 700 ಕೋಟಿ ವೆಚ್ಚದಲ್ಲಿ ಮಾದರಿ ವೈದ್ಯಕೀಯ ಕಾಲೇಜು ನಿರ್ಮಿಸಲಾಗುತ್ತಿದೆ. ಕೆಎಲ್‌ಇ ಅಡಿ 300 ಸಂಸ್ಥೆ ಇವೆ. ಮುಂದಿನ 20 ವರ್ಷದಲ್ಲಿ ಈ ಸಂಖ್ಯೆಯನ್ನು 500 ತಲುಪಿಸುವ ಗುರಿ ಇದೆ. ಜನರ ಆಶೀರ್ವಾದ ಹೀಗೆ ಇದ್ದರೆ ಇದು ಸಾಧ್ಯವಾಗಲಿದೆ ಎಂದು ಕೋರೆ ತಿಳಿಸಿದರು.


ಕೆಎಲ್‌ಇ ಸಂಸ್ಥೆಯ ವಿದ್ಯಾರ್ಥಿನಿ ಶ್ರೇಯಾ ರಟಗಲ್ ಚಿತ್ರಸಿದ ಭಾವಚಿತ್ರವನ್ನು ಪ್ರಭಾಕರ ಕೊರೆ ಅವರಿಗೆ ಹಸ್ತಾಂತರಿಸಿದರು.

ವಿಪ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಈ ಸಂಸ್ಥೆಗಳಲ್ಲಿ ಕಲಿತವರು ಉತ್ತಮ ಸಂಸ್ಕಾರ ಪಡೆಯುವ ಮೂಲಕ ಸಮಾಜದ ಉನ್ನತ ಸ್ಥಾನದಲ್ಲಿದ್ದಾರೆ. ಉತ್ತಮ ರೀತಿಯಲ್ಲಿ ಸಂಸ್ಥೆ ಕಟ್ಟಲು ಅನೇಕ ಬಾರಿ ನಾನು ಪ್ರಭಾಕರ ಕೋರೆ ಅವರೊಂದಿಗೆ ಚರ್ಚಿಸಿದ್ದೇನೆ. ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೇರಿದಂತೆ ತಾವು ಇದೇ ಸಂಸ್ಥೆಯಲ್ಲಿ ಅಧ್ಯಯನ ಮಾಡಿರುವುದಾಗಿ ತಿಳಿಸಿದರು.

ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಮಾತನಾಡಿ, ಕೆಎಲ್‌ಇ ಸಂಸ್ಥೆ ಇಂದು ಹೆಮ್ಮರವಾಗಿ ಬೆಳೆದಿದೆ. ನಾನು ಕೆಎಲ್‌ಇ ಸಂಸ್ಥೆಯ ವಿದ್ಯಾರ್ಥಿಯಾಗಿದ್ದೆ. ಇಲ್ಲಿ ಶಿಕ್ಷಣ ಪಡೆದಿದ್ದರಿಂದ ಶಾಸಕ, ಸಚಿವನಾಗಿ, ಮುಖ್ಯಮಂತ್ರಿಯಾಗಿ ಕೆಲಸ ಮಾಡಲು ಸಾಧ್ಯವಾಗಿದೆ. ಶಿಕ್ಷಣ ಸಂಸ್ಥೆಗಳು, ವೈದ್ಯಕೀಯ ಕಾಲೇಜಿನ ಮೂಲಕ ಪ್ರಭಾಕರ ಕೋರೆ ಸಮಾಜಕ್ಕೆ ಅನನ್ಯ ಕೊಡುಗೆ ನೀಡುತ್ತಿದ್ದಾರೆ. ಈ ಭಾಗದ ಅಭಿವೃದ್ಧಿಯಲ್ಲಿ ಅವರ ಪಾತ್ರ ಪ್ರಮುಖವಾಗಿದೆ ಎಂದರು.

ಉದ್ಯಮಿ ವಿಜಯ ಸಂಕೇಶ್ವರ ಮಾತನಾಡಿ, ಪ್ರಭಾಕರ ಕೋರೆ ಕಳೆದ 40 ವರ್ಷದಿಂದ ಏಕಲವ್ಯನಂತೆ ಶ್ರಮಿಸಿ ಬೃಹತ್ ಸಂಸ್ಥೆ ಕಟ್ಟಿದ್ದಾರೆ. ಚಟುವಟಿಕೆಯ ವೇಳೆ ಅವರಲ್ಲಿ ತಾರುಣ್ಯ ಕಾಣುತ್ತದೆ. ಸಾಮಾಜಿಕ ಅಭಿವೃದ್ಧಿಗೆ ಕೈಜೋಡಿಸಿದ್ದಾರೆ. ಬೆಳಗಾವಿಯಲ್ಲಿ ಕೆಎಲ್‌ಇಯಿಂದ ಕ್ಯಾನ್ಸರ್ ಆಸ್ಪತ್ರೆ ನಿರ್ಮಿಸಲಾಗುತ್ತಿದೆ. ಕೋರೆ ಸಂಸ್ಥೆಯ ಆಜೀವ ಕಾರ್ಯಾಧ್ಯಕ್ಷರಾಗಿ ಮುಂದುವರಿಯಬೇಕು ಎಂದು ಆಶಿಸಿದರು.

ಇದೇ ವೇಳೆ ಪ್ರಭಾಕರ ಕೋರೆ ದಂಪತಿ ಸನ್ಮಾನಿಸಲಾಯಿತು. ವೇದಿಕೆಯಲ್ಲಿ ಮಹಿಳೆಯರು ಆಶಾ ಕೋರೆ ಅವರಿಗೆ ಅರಿಶಿಣ, ಕುಂಕುಮ ನೀಡಿದರು. ಸಂಸ್ಥೆಯ ವಿದ್ಯಾರ್ಥಿನಿ ಶ್ರೇಯಾ ರಟಗಲ್ ಚಿತ್ರಸಿದ ಭಾವಚಿತ್ರವನ್ನು ಪ್ರಭಾಕರ ಕೊರೆ ಅವರಿಗೆ ಹಸ್ತಾಂತರಿಸಿದರು.

ಸಂಸ್ಥೆ ಅಧ್ಯಕ್ಷ ಮಹಾಂತೇಶ ಕೌಜಲಗಿ ಅಧ್ಯಕ್ಷತೆ ವಹಿಸಿದ್ದರು. ಕೆಎಲ್‌ಇ ತಾಂತ್ರಿಕ ವಿವಿ ಉಪಕುಲಪತಿ ಡಾ. ಅಶೋಕ ಶೆಟ್ಟರ್, ಆಡಳಿತ ಮಂಡಳಿ ನಿರ್ದೇಶಕ ಶಂಕರಣ್ಣ ಮುನವಳ್ಳಿ ಸೇರಿದಂತೆ ಮಂಡಳಿ ಸದಸ್ಯರು ಇದ್ದರು. ಕಾರ್ಯಕ್ರಮದಲ್ಲಿ ಕೆಎಲ್‌ಇ ಸಂಸ್ಥೆಯ ಸಾವಿರಾರು ವಿದ್ಯಾರ್ಥಿಗಳು, ಶಿಕ್ಷಕರು ಪಾಲ್ಗೊಂಡಿದ್ದರು.